<u>ಕರ್ನಾಟಕ ವಿಧಾನ ಪರಿಷತ್ತು</u>

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 832
2. ಸದಸ್ಯರ ಹೆಸರು : ಶ್ರೀ ಸಲೀಂ ಅಹಮದ್
3. ಉತ್ತರಿಸುವ ದಿನಾಂಕ : 26/12/2022
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ನಗರ ಪ್ರದೇಶಗಳಲ್ಲಿ ಅಳವಡಿಸಿರುವ ಸಿ.ಸಿ. ಕ್ಯಾಮರಗಳು ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿರುವ ನಗರ ಪ್ರದೇಶಗಳಲ್ಲಿ ಅಳವಡಿಸಿರುವ ಸಿ.ಸಿ. ಕ್ಯಾಮರಗಳ ಪೈಕಿ ಕೆಲವು ಸಿಸಿ ಕ್ಯಾಮರಾಗಳು ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಈ ರೀತಿ ಅಳವಡಿಸಿರುವ ಸಿ.ಸಿ. ಕ್ಯಾಮರಗಳ ನಿರ್ವಹಣೆಯನ್ನು ಮಾಡುವ ಜವಾಬ್ದಾರಿಯನ್ನು ಯಾರಿಗೆ ವಹಿಸಲಾಗಿದೆ ; | ಇಲಾಖೆ ವತಿಯಿಂದ ಖರೀದಿಸಿ ಅಳವಡಿಸಲಾಗಿರುವ ಸಿಸಿ. ಕ್ಯಾಮರಾಗಳ ನಿರ್ವಹಣೆಯನ್ನು ಇಲಾಖಾ ವತಿಯಿಂದಲೇ ನಿರ್ವಹಣೆ ಮಾಡುವ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ. ಖಾಸಗಿ ಸಂಸ್ಥೆಗಳಿಂದ ಅಳವಡಿಸಲಾಗಿರುವ ಸಿ.ಸಿ. ಕ್ಯಾಮರಾಗಳ ನಿರ್ವಹಣೆಯಯನ್ನು ಸಂಬಂಧಪಟ್ಟ ಖಾಸಗಿ ಸಂಸ್ಥೆಗಳೇ ನಿರ್ವಹಿಸುತ್ತವೆ. |
| ಇ) | ಸಿ.ಸಿ. ಕ್ಯಾಮರಾಗಳು ನಿಷ್ಕ್ರಿಯವಾಗಿರುವುದರಿಂದ ಅಪರಾಧಗಳನ್ನು ಕಂಡುಹಿಡಿಯಲು ಹಾಗೂ ಮುಂಜಾಗ್ರತ ಕ್ರಮಗಳನ್ನು ವಹಿಸಲು ಪೊಲೀಸ್ ಇಲಾಖೆಯು ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಿ.ಸಿ ಕ್ಯಾಮರಾಗಳು ನಿಷ್ಕ್ರಿಯವಾಗಿರುವುದರಿಂದ ಪೊಲೀಸ್ ಇಲಾಖೆಯು ಅಪರಾಧಗಳನ್ನು ಕಂಡು ಹಿಡಿಯಲು ಹಾಗೂ ಮುಂಜಾಗ್ರತಾ ಕ್ರಮಗಳನ್ನು ವಹಿಸಲು ವಿಫಲವಾಗಿರುವುದಿಲ್ಲ. ಆದರೂ ನಿಷ್ಕ್ರೀಯಗೊಂಡ ಕ್ಯಾಮರಾಗಳನ್ನು ಆದ್ಯತೆಯ ಮೇರೆಗೆ ಸರಿಪಡಿಸುವಂತೆ ಸೂಚನೆಗಳನ್ನು ನೀಡಲಾಗುವುದು. |
| ಈ) | ರಾಜ್ಯದಲ್ಲಿ ನಡೆಯುವ ಅಪರಾಧ ಪ್ರಕರಣಗಳಿಗೆ ಕಡಿವಾಣಹಾಕಿ ಜನರ ರಕ್ಷಣೆಯ ಸಲುವಾಗಿ ಇನ್ನೂ ಹೆಚ್ಚಿನ ಸ್ಥಳಗಳಲ್ಲಿ ಕ್ಯಾಮರಾಗಳನ್ನು ಅಳವಡಿಸಿ ನಿರ್ವಹಣೆಗಾಗಿ ಸಿಬ್ಬಂದಿಗಳನ್ನು ನಿಯೋಜಿಸಲು ಸರ್ಕಾರ ಕ್ರಮವೇನು ? | ರಾಜ್ಯದಲ್ಲಿ ನಡೆಯುವ ಅಪರಾಧ ಪ್ರಕರಣಗಳಿಗೆ ಕಡಿವಾಣಹಾಕಿ ಜನರ ರಕ್ಷಣೆಯ ಸುರಕ್ಷತಾ ಕ್ರಮವಾಗಿ ಸರ್ಕಾರದ ವಿವಿಧ ಯೋಜನೆಗಳಡಿಯಲ್ಲಿ ಬಿಡುಗಡೆಯಾಗುವ ಅನುದಾನದಲ್ಲಿ ಹಂತ ಹಂತವಾಗಿ ಅವಶ್ಯವಿರುವ ಎಲ್ಲಾ ಕಡೆಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಿ, ನಿರ್ವಹಣೆಗಾಗಿ ಸಿಬ್ಬಂದಿಗಳನ್ನು ನಿಯೋಜಿಸಲು ಕ್ರಮವನ್ನು ಕೈಗೊಳ್ಳಲಾಗುತ್ತದೆ.<br><br>ಪ್ರಸ್ತುತ ರಾಜ್ಯದಲ್ಲಿ ಸಾರ್ವಜನಿಕರ ಸುರಕ್ಷತೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಕರ್ನಾಟಕ ಸಾರ್ವಜನಿಕ ಸುರಕ್ಷೆಯ (ಕ್ರಮಗಳ) ಜಾರಿ ಅಧಿನಿಯಮ 2018 ಈಗಾಗಲೇ ಅನುಷ್ಠಾನಗೊಂಡಿದ್ದು, ಸದರಿ ಅಧಿನಿಯಮದ ಅಡಿಯಲ್ಲಿ ನೀಡಲಾದ ನಿರ್ದೇಶನಗಳನ್ವಯ ಸಿಸಿ ಕ್ಯಾಮರಾಗಳನ್ನು ಅಳವಡಿಸುವ ಕುರಿತು ಕ್ರಮ ವಹಿಸಲಾಗಿರುತ್ತದೆ. |

**ಕಡತ ಸಂಖ್ಯೆ: HD/138/EFS/2022**

(ಅರಗ ಜ್ಞಾನೇಂದ್ರ)
ಗೃಹ ಸಚಿವರು